# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ 05 /2021-22 ದಿನಾಂಕ: 09.04.2021

**ದಿನಾಂಕ:- 09 -04-2021 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ಮಾಸ್ಕ್ ರಸ್ತೆಯಲ್ಲಿ ಶೌಚಾಲಯ ನಿರ್ಮಾಣ ಮಾಡುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಗಿರುತ್ತದೆ.
2. ಮಿಲ್ಲರ್ ರಸ್ತೆಯಲ್ಲಿ ಸ್ಮಾರ್ಟ್ ಸಿಟಿ ರವರಿಂದ ಕೈಗೊಂಡಿದ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಲು ತಿಳಿಸಲಾಗಿರುತ್ತದೆ.
3. ಕೋಲ್ಸ್ ಪಾರ್ಕಿನಲ್ಲಿ ಬಿದಿ ನಾಯಿಗಳ ಹಾವಳಿಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಲಾಗಿರುತ್ತದೆ.
4. ಮಾಸ್ಕ್ ರಸ್ತೆಯ ಕನ್ಸ್‌ರವೆನ್ಸಿಯಲ್ಲಿ ಕಸ ಮತ್ತು ಡೆಬ್ರೀಸ್ ಹಾಕದಂತೆ ತಡೆಯಲು ಸದರಿ ಕನ್ಸ್‌ರವೆನ್ಸಿಗೆ ಗವಿಟ್ ಅಳವಡಿಸಲು ತಿಳಿಸಲಾಗಿರುತ್ತದೆ.
5. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಲಸಿಕೆ ಹಾಕಿರುವ ಬಗ್ಗೆ ಮಾಹಿತಿ ನೀಡಲು ತಿಳಿಸಲಾಗಿರುತ್ತದೆ.
6. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಟೆಸ್ಟಿಂಗ್ ಮತ್ತು ಪ್ರಸ್ತುತವಾಗಿ ಆಕ್ಟೀವ್ ಆಗಿರುವ ಕೇಸ್‌ಗಳ ಮಾಹಿತಿ ನೀಡಲು ತಿಳಿಸಲಾಯಿತು.
7. ವಿವಿಧ ಇಲಾಖೆಯ ಅಧಿಕಾರಿಗಳು ಮುಂದಿನ ವಾರ್ಡ್ ಕಮಿಟಿ ಮಿಟಿಂಗ್‌ಗೆ ಹಾಜರಾಗಲು ತಿಳಿಸಲಾಯಿತು.

ನಂತರ ಮುಂದಿನ ಸಭೆಯೊಳಗೆ ಮೇಲ್ಕಂಡ ಕೋವಿಡ್-19 ರ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿಗಳು

ಕಾರ್ಯದರ್ಶಿ 9/4

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಾರ್ಡ್ ಸಮಿತಿಯ ಸದಸ್ಯರು, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
5. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner